# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 647 (856) |
| ಸದಸ್ಯರ ಹೆಸರು | : | ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 20.12.2021 |
| ಉತ್ತರಿಸುವವರು | : | ಅರಣ್ಯ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು. |

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿ ವನ್ಯಜೀವಿಗಳ ಸಂಖ್ಯೆ ಕಡಿಮೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಅಳಿವಿನ ಅಂಚಿನಲ್ಲಿ ಇರುವಂಥ ವನ್ಯಜೀವಿಗಳ ಸಂರಕ್ಷಣೆಗೆ ಸರ್ಕಾರ ಯಾವ ಯೋಜನೆ ರೂಪಿಸಿದೆ;</td><td>ಕರ್ನಾಟಕ ರಾಜ್ಯದಲ್ಲಿ ಅರಣ್ಯ ಇಲಾಖೆಯ ಕಟ್ಟುನಿಟ್ಟಿನ ರಕ್ಷಣಾ ಮತ್ತು ಸಂರಕ್ಷಣಾ ಕಾರ್ಯಕ್ರಮಗಳಿಂದ ಮುಖ್ಯವಾಗಿ, ಆನೆ, ಹುಲಿ, ಚಿರತೆ ಮುಂತಾದ ವನ್ಯಪ್ರಾಣಿಗಳ ಸಂಖ್ಯೆಯಲ್ಲಿ ಹೆಚ್ಚಳವಾಗಿದೆ. 2017ರ ಆನೆ ಗಣತಿಯಂತೆ ರಾಜ್ಯದಲ್ಲಿ 6049 ಆನೆಗಳಿದ್ದು, ರಾಷ್ಟ್ರದಲ್ಲಿನ ಆನೆಗಳ ಸಂಖ್ಯೆಯು ಶೇ.25 ರಷ್ಟಿದ್ದು, ರಾಷ್ಟ್ರದಲ್ಲಿಯೇ ಪ್ರಥಮ ಸ್ಥಾನದಲ್ಲಿದೆ. ಅಲ್ಲದೇ 2018ರ ಸಾಲಿನ ಹುಲಿ ಗಣತಿಯಂತೆ 524 ಹುಲಿಗಳಿವೆ ಎಂದು ಅಂದಾಜಿಸಲಾಗಿದ್ದು, ರಾಷ್ಟ್ರದಲ್ಲಿಯೇ ಎರಡನೇ ಸ್ಥಾನದಲ್ಲಿದೆ.<br><br>ಅಳಿವಿನಂಚಿನಲ್ಲಿರುವ ವನ್ಯಜೀವಿ/ ಸಸ್ತನಿಗಳ ಸಂರಕ್ಷಣೆಗಾಗಿ ಪ್ರಸ್ತಾಪಿಸಲಾದ ಯೋಜನೆಗಳಿಗೆ ಸರ್ಕಾರವು ಅನುಮೋದನೆ ನೀಡಿ ಸಂರಕ್ಷಣಾ ಕಾರ್ಯಗಳಿಗಾಗಿ ಈ ಕೆಳಗಿನಂತೆ ಆರ್ಥಿಕ ನೆರವು ನೀಡಲಾಗಿದೆ.<br><br>(ರೂ.ಲಕ್ಷಗಳಲ್ಲಿ)
<table>
<tr><th>ಕ್ರ. ಸಂ</th><th>ಯೋಜನೆ</th><th>2020-21</th><th>2021-22</th></tr>
<tr><td>1</td><td>ಗ್ರೇಟ್ ಇಂಡಿಯನ್ ಬಸ್ಟರ್ಡ್ ಸಂರಕ್ಷಣೆ</td><td>137.67</td><td>46.00</td></tr>
<tr><td>2</td><td>ರಣ ಹದ್ದುಗಳ ಸಂತತಿ ಸಂರಕ್ಷಣಾ ಕೇಂದ್ರ</td><td>218.10</td><td>90.34</td></tr>
<tr><td>3</td><td>ಅರೇಬಿಯನ್ ಸಮುದ್ರದ ಹಂಪ್ ಬ್ಯಾಕ್ ತಿಮಿಂಗಲಗಳ ಸಂರಕ್ಷಣೆ</td><td>33.66</td><td>98.24</td></tr>
<tr><td>4</td><td>ಪೂರ್ವ ಪ್ರಸ್ಥ ಭೂಮಿಯ ಬಯಲು ಸೀಮೆ ಜಿಲ್ಲೆಗಳ ವ್ಯಾಪ್ತಿಯಲ್ಲಿರುವ ಬೀದರ್, ಯಾದಗಿರಿ, ಕೊಪ್ಪಳ, ಕಲಬುರ್ಗಿ, ಚಿತ್ರದುರ್ಗ, ಬಾಗಲಕೋಟೆ, ದಾವಣಗೆರೆ, ಬಳ್ಳಾರಿ ಜಿಲ್ಲೆಗಳ ವ್ಯಾಪ್ತಿಯಲ್ಲಿರುವ ಅಳಿವಿನಂಚಿನಲ್ಲಿರುವ ಪ್ರಾಣಿಪಕ್ಷಿ ಸಂಕುಲಗಳ ಸಂರಕ್ಷಣೆ ಮತ್ತು ಅಭಿವೃದ್ಧಿಗಾಗಿ.</td><td>200.00</td><td>-</td></tr>
</table>
</td></tr>
</table>

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td></td><td></td><td>
<table>
<tr><td>5</td><td>ರಾಜ್ಯದ ಪೂರ್ವಪ್ರಸ್ಥ ಭೂಮಿ ಪ್ರದೇಶದಲ್ಲಿ ಕಾಣಸಿಗುವ ಲೆಸ್ಸರ್ ಫ್ಲೋರಿಕಾನ್ (Lesser Florican) ಪಕ್ಷಿ ಪ್ರಭೇದ ಸಂರಕ್ಷಣೆಗಾಗಿ.</td><td>-</td><td>50.00</td></tr>
</table>
</td></tr>
<tr><td>ಆ)</td><td>ಕಳೆದ ಎರಡು ವರ್ಷಗಳಲ್ಲಿ ವನ್ಯಜೀವಿಗಳ ಸಂರಕ್ಷಣೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಎಷ್ಟು ಅನುದಾನ ಬಿಡುಗಡೆಯಾಗಿದೆ; ಮತ್ತು ಖರ್ಚಾಗಿರುವ ಅನುದಾನವೆಷ್ಟು;</td><td>ರಾಜ್ಯದಲ್ಲಿ ವನ್ಯಜೀವಿ ಸಂರಕ್ಷಣೆಗೆ ಕಳೆದ ಎರಡು ವರ್ಷಗಳಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಬಿಡುಗಡೆಯಾದ ಮತ್ತು ಖರ್ಚು ಮಾಡಲಾದ ಅನುದಾನದ ವಿವರ ಈ ಕೆಳಗಿನಂತಿದೆ.<br>(ರೂ.ಲಕ್ಷಗಳಲ್ಲಿ)
<table>
<tr><th rowspan="2">ವರ್ಷ</th><th colspan="2">ರಾಜ್ಯ</th><th colspan="2">ಕೇಂದ್ರ</th></tr>
<tr><th>ಬಿಡುಗಡೆ</th><th>ವೆಚ್ಚ</th><th>ಬಿಡುಗಡೆ</th><th>ವೆಚ್ಚ</th></tr>
<tr><td>2019-20</td><td>13,913.67</td><td>13,722.02</td><td>6,372.38</td><td>6,045.30</td></tr>
<tr><td>2020-21</td><td>12,285.00</td><td>12,280.45</td><td>6,621.73</td><td>6,573.69</td></tr>
</table>
</td></tr>
<tr><td>ಇ)</td><td>ವನ್ಯಜೀವಿಗಳ ಸಂರಕ್ಷಣೆ ಬಗ್ಗೆ ಗಂಭೀರವಾಗಿ ಪರಿಗಣಿಸಿ ಸೂಕ್ತ ರಕ್ಷಣಾ ಕಾರ್ಯಗಳನ್ನು ತ್ವರಿತವಾಗಿ ಜಾರಿಗೆ ತರಲಾಗುವುದೇ?</td><td>ವನ್ಯಜೀವಿಗಳ ಸಂರಕ್ಷಣೆ ಬಗ್ಗೆ ನಿಯಮಿತವಾಗಿ ಕೈಗೊಳ್ಳಲಾಗುತ್ತಿರುವ ಕ್ರಮಗಳ ವಿವರ ಈ ಕೆಳಗಿನಂತಿದೆ.<br><br>1. ರಾಜ್ಯದಲ್ಲಿರುವ ವನ್ಯಜೀವಿಗಳಿಗೆ ಸಂಪೂರ್ಣ ರಕ್ಷಣೆ ನೀಡುವ ಸಲುವಾಗಿ 5 ರಾಷ್ಟ್ರೀಯ ಉದ್ಯಾನವನ 33 ಅಭಯಾರಣ್ಯಗಳ (5 ಹುಲಿ ಸಂರಕ್ಷಿತ ಪ್ರದೇಶಗಳು ಒಳಗೊಂಡಂತೆ), 14 ಸಂರಕ್ಷಣಾ ಮೀಸಲು ಪ್ರದೇಶ ಮತ್ತು 1 ಸಮುದಾಯ ಮೀಸಲು ಪ್ರದೇಶಗಳನ್ನು ಘೋಷಿಸಲಾಗಿದೆ.<br><br>2. ವನ್ಯಪ್ರಾಣಿಗಳಿಗಾಗಿ ಅರಣ್ಯ ಪ್ರದೇಶಗಳ ಒಳಗೆ ನೀರಿನ ಸೌಕರ್ಯವನ್ನು ಸತತವಾಗಿ ಒದಗಿಸಿ, ಹಣ್ಣು ಹಂಪಲುಗಳನ್ನು ಬೆಳೆಸಿ ಪ್ರಾಣಿಗಳ ಆವಾಸಸ್ಥಾನವನ್ನು ಅಭಿವೃದ್ಧಿಗೊಳಿಸಲಾಗುತ್ತಿದೆ.<br><br>3. ಅರಣ್ಯ ಪ್ರದೇಶಗಳಲ್ಲಿ ವನ್ಯಪ್ರಾಣಿಗಳಿಗೆ ವರ್ಷವಿಡೀ ಕುಡಿಯುವ ನೀರು ದೊರಕುವಂತೆ ಅರಣ್ಯದಲ್ಲಿರುವ ಕೆರೆಗಳ ಹೂಳು ತೆಗೆಯುವುದು. ಗಲ್ಲಿಪ್ಲಗ್, ಚೆಕ್‌ಡ್ಯಾಮ್, ನಾಲಾಬಂಡಿಗ್, ಸೌರಬೇಲಿ, ಆನೆ ತಡೆಕಂದಕ ಇತ್ಯಾದಿ ಕೆಲಸಗಳನ್ನು ಸಹ ರಕ್ಷಿತಾರಣ್ಯಗಳಲ್ಲಿ ತೆಗೆದುಕೊಳ್ಳಲಾಗಿದೆ.<br><br>4. ಇಲಾಖೆ ಸಿಬ್ಬಂದಿಗಳನ್ನು ದಿನದ 24 ಘಂಟೆಗಳಲ್ಲೂ ವ್ಯವಸ್ಥಿತವಾಗಿ ಕಾವಲು ಕಾಯಲು ನೇಮಿಸಲಾಗಿದೆ ಮತ್ತು ಆ ವ್ಯವಸ್ಥೆಯನ್ನು ಸೂಕ್ತ ಮೇಲಾಧಿಕಾರಿಗಳಿಂದ ಮೇಲ್ವಿಚಾರಣೆ ಮಾಡಲಾಗುತ್ತಿದೆ.</td></tr>
</table>

| ಕ್ರ. ಸಂ. | ಪ್ರಶ್ನೆ | ಉತ್ತರ |
| --- | --- | --- |
| | | 5. ರಕ್ಷಿತ ಅರಣ್ಯಗಳ ಸೂಕ್ಷ್ಮ ಪ್ರದೇಶಗಳಲ್ಲಿ ಕಳ್ಳಬೇಟೆ ತಡೆ ಶಿಬಿರಗಳನ್ನು ರಚಿಸಿ ಅರಣ್ಯ ಮತ್ತು ವನ್ಯಜೀವಿಗಳಿಗೆ ರಕ್ಷಣೆ ನೀಡಲಾಗುತ್ತಿದೆ.<br>6. ಬೆಂಕಿ ಸಂರಕ್ಷಣೆ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿದೆ. |

ಸಂಖ್ಯೆ: ಅಪಜೀ 234 ಎಫ್‌ಡಬ್ಲ್ಯೂಎಲ್ 2021

(ಉಮೇಶ್ ವಿ. ಕತ್ತಿ)
ಅರಣ್ಯ, ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಸಚಿವರು